# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 541 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ. ನಮೋಶಿ |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಬದಲಾಯಿಸುವ ಬಗೆಗಿನ ಬೇಡಿಕೆ ಪತ್ರಗಳು ಶಿಫಾರಸ್ಸು ಪತ್ರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಕರ್ನಾಟಕ ರಾಜ್ಯದ ಗ್ರಾಮೀಣ ಪ್ರತಿಭಾನ್ವಿತ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಗುಣಮಟ್ಟ ಶಿಕ್ಷಣ ನೀಡಲು ಜವಹರ್ ನವೋದಯ ವಸತಿ ಶಾಲೆಗಳ ಮಾದರಿಯಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸಲು ಹಾಗೂ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಅಧೀನದ ವಸತಿ ಶಾಲೆಗಳನ್ನು ಒಂದೇ ಸೂರಿನಡಿ ನಿರ್ವಹಿಸಲು ಸರ್ಕಾರದ ಆದೇಶ ಸಂಖ್ಯೆ: ಸಕಇ 532 ಎಸ್ಇಡಬ್ಲ್ಯೂ 96, ದಿನಾಂಕ:06-10-1999ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಿ ಆದೇಶಿಸಿದೆ.<br><br>ಪ್ರಾರಂಭದಲ್ಲಿ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಒಟ್ಟು 79 ವಸತಿ ಶಾಲೆಗಳು ಸಂಘಕ್ಕೆ ವರ್ಗಾವಣೆಯಾಗಿದ್ದು, ತದನಂತರ ವಸತಿ ಶಾಲೆ/ಕಾಲೇಜುಗಳು ಮಂಜೂರಾಗಿದ್ದು, ಪ್ರಸ್ತುತ ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 2.16 ಲಕ್ಷ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ<br><br>ವಸತಿ ಶಾಲೆ/ಕಾಲೇಜುಗಳ ಸಮರ್ಪಕ ಕಾರ್ಯನಿರ್ವಹಣೆ ಹಾಗೂ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಂಘವು ಶ್ರಮಿಸುತ್ತಿದೆ. ಪ್ರಾರಂಭದಿಂದಲೂ ಪ್ರಸ್ತುತ ಶೈಕ್ಷಣಿಕ ಸಾಲಿನವರೆವಿಗೂ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿ ಫಲಿತಾಂಶವು ಅತ್ಯುತ್ತಮವಾಗಿ ಬರುತ್ತಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಒಂದು ಬೃಹತ್ ಸಂಸ್ಥೆಯಾಗಿದ್ದು, ಸಾರ್ವಜನಿಕ ಸಂಪರ್ಕಕ್ಕೆ ಮತ್ತು ವಿದ್ಯಾರ್ಥಿಗಳ ಗುಣಮಟ್ಟದ ವಿದ್ಯಾಭ್ಯಾಸಕ್ಕೆ ಉತ್ತಮ ವಾತಾವರಣ ಕಲ್ಪಿಸಿ ಕೊಡಲು ಅನುಕೂಲಕರವಾಗಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಪ್ರಸ್ತಾವನೆ ಪ್ರಸ್ತುತ ಪರಿಶೀಲನೆಯಲ್ಲಿರುತ್ತದೆ. |
| ಆ | ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ನಿರ್ದೇಶನಾಲಯ ಮಾಡುವ ಪ್ರಕ್ರಿಯೆ ಪ್ರಾರಂಭವಾಗಿದೆಯೆ; ಪ್ರಾರಂಭವಾಗಿದ್ದಲ್ಲಿ, ಪ್ರಕ್ರಿಯೆ ಯಾವ ಹಂತದಲ್ಲಿದೆ; ಇಲ್ಲದಿದ್ದಲ್ಲಿ, ಯಾವಾಗ ಪ್ರಕ್ರಿಯೆ ಪ್ರಾರಂಭ ಮಾಡಲಾಗುವುದು; | |
| ಇ | ನಿರ್ದೇಶನಾಲಯ ಮಾಡಲು ಅಡೆತಡೆಗಳೇನಾದರೂ ಇವೆಯೇ; ಇದ್ದಲ್ಲಿ ಅದರ ಸಮಸ್ಯೆಗೆ ಪರಿಹಾರಗಳೇನು; | |
| ಈ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯ ಮಾಡಿ ಎಲ್ಲಾ ವಸತಿ ಶಾಲೆಗಳನ್ನು ನಿರ್ದೇಶನಾಲಯದಡಿ ತಂದು ಅಭಿವೃದ್ಧಿ ಪಡಿಸಿದ್ದಲ್ಲಿ ವಿದ್ಯಾರ್ಥಿಗಳಿಗೆ ಸಿಬ್ಬಂದಿಗಳಿಗೆ ಅನುಕೂಲವಾಗಲಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು? | |

ಸಕಇ-ಎಂಡಿಎಸ್/226/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು